**OCTOBER 05 2023**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ರಾಜ್ಯದ ಬರ ಪರಿಸ್ಥಿತಿ ಅಧ್ಯಯನಕ್ಕೆ ಕೇಂದ್ರದ ಮೂರು ತಂಡಗಳು ಇಂದು ವಿವಿಧ ಜಿಲ್ಲಾ ಪ್ರವಾಸ ಕೈಗೊಂಡು ಪರಿಶೀಲನೆ.**
- **"ಪ್ರಧಾನಮಂತ್ರಿ ಉಜ್ವಲಾ ಯೋಜನೆಯಡಿ" ನೀಡುವ ಸಹಾಯಧನ 200 ರಿಂದ 300 ರೂಪಾಯಿಗೆ ಏರಿಸಲು ಕೇಂದ್ರ ಸಚಿವ ಸಂಪುಟ ನಿರ್ಧಾರ.**
- **ಅಸಂಘಟಿತ ವಲಯ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ನೂತನ ಯೋಜನೆ ಜಾರಿಗೆ ಸರ್ಕಾರದ ಚಿಂತನೆ – ಸಚಿವ ಸಂತೋಷ ಲಾಡ.**
- **ಅಕ್ಟೋಬರ್ 23 ರಿಂದ ಮೂರು ದಿನಗಳ ಕಾಲ ನಡೆಯಲಿರುವ ಕಿತ್ತೂರು ಉತ್ಸವಕ್ಕೆ ಸಕಲ ಸಿದ್ಧತೆ – ಸಚಿವ ಸತೀಶ್ ಜಾರಕಿಹೊಳಿ.**

**ಈಗ ವಾರ್ತೆಗಳ ವಿವರ**

**ರಾಜ್ಯದ ಬರ ಪರಿಸ್ಥಿತಿ ಅಧ್ಯಯನಕ್ಕೆ ಕೇಂದ್ರದ ಮೂರು ತಂಡಗಳು** ಇಂದಿನಿಂದ ನಾಲ್ಕು ದಿನಗಳ ಕಾಲ ವಿವಿಧ ಜಿಲ್ಲೆಗಳಿಗೆ ಪ್ರವಾಸ ಕೈಗೊಂಡು ಪರಿಶೀಲನೆ ನಡೆಸಲಿವೆ. ಕೇಂದ್ರ ತಂಡ ಹತ್ತು ಸದಸ್ಯರನ್ನೊಳಗೊಂಡಿದ್ದು, ರಾಜ್ಯದ ಸ್ಥಳೀಯ ಅಧಿಕಾರಿಗಳೊಂದಿಗೆ ಕೃಷಿ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಲಿದೆ. ಇಂದು ಮೂರೂ ತಂಡಗಳು ಕರ್ನಾಟಕ ರಾಜ್ಯ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಲಿವೆ. ಮಧ್ಯಾಹ್ನ ವಿಧಾನಸೌಧ ಕೊಠಡಿಯಲ್ಲಿ ರಾಜ್ಯದ ಬರ ಪರಿಸ್ಥಿತಿಯ ಸಂಕ್ಷಿಪ್ತ ವಿವರ ಪಡೆದು ಜಿಲ್ಲೆಗಳಿಗೆ ತೆರಳಲಿವೆ.ಮೊದಲ ತಂಡವು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ಅವರ ನೇತೃತ್ವದಲ್ಲಿ, ಎಣ್ಣೆ ಬೀಜಗಳ ಅಭಿವೃದ್ಧಿ ಇಲಾಖೆಯ ನಿರ್ದೇಶಕ ಡಾಕ್ಟರ್ ಜೆ ಪೊನ್ನುಸ್ವಾಮಿ, ವೆಚ್ಚ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕ ಮಹೇಂದ್ರ ಚಂಡೇಲಿಯ, ನೀತಿ ಆಯೋಗದ ಸಂಶೋಧನಾಧಿಕಾರಿ ಶಿವಚರಣ್ ಮೀನಾ, ರಾಜ್ಯ ಕೃಷಿ ಆಯುಕ್ತ ಎಸ್.ಪಾಟೀಲ್ ಅವರನ್ನು ಒಳಗೊಂಡಿದೆ. 2ನೇ ತಂಡವು ಕೇಂದ್ರ ಕುಡಿಯುವ ನೀರು ಹಾಗೂ ಸ್ವಚ್ಛತಾ ಸಚಿವಾಲಯದ ಹೆಚ್ಚುವರಿ ಸಲಹೆಗಾರ ಡಿ.ರಾಜಶೇಖರ್ ಅವರ ನೇತೃತ್ವದಲ್ಲಿ ಪಶು ಸಂಗೋಪನೆ ಇಲಾಖೆ ನಿರ್ದೇಶಕ ಆರ್.ಥಾಕರೆ, ಗ್ರಾಮೀಣಾಭಿವೃದ್ಧಿ ಇಲಾಖೆಯ ಸಹಾಯಕ ಆಯುಕ್ತ ಮೋತಿರಾಂ, ರಾಜ್ಯದ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರದ ನಿರ್ದೇಶಕ ಕರೀಗೌಡ ಅವರನ್ನು ಒಳಗೊಂಡಿದೆ. ಮೂರನೇ ತಂಡವು ಕೇಂದ್ರ ಜಲ ಆಯೋಗದ ನಿರ್ದೇಶಕ ಅಶೋಕ್ ಕುಮಾರ್.ವಿ ನೇತೃತ್ವದಲ್ಲಿ ಎಂ.ಎನ್.ಸಿ.ಎಫ್.ಸಿ ಯ ಉಪ ನಿರ್ದೇಶಕ ಕರಣ್ ಚೌಧರಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಉಪ ಕಾರ್ಯದರ್ಶಿ ಸಂಗೀತ್ ಕುಮಾರ್ ಹಾಗೂ ರಾಜ್ಯದ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರದ ಹಿರಿಯ ಸಲಹೆಗಾರ ಡಾಕ್ಟರ್ ಶ್ರೀನಿವಾಸ ರೆಡ್ಡಿ ಅವರನ್ನು ಒಳಗೊಂಡಿದೆ. ಮೊದಲ ತಂಡ ಇಂದು ಬೆಳಗಾವಿಗೆ ಆಗಮಿಸಲಿದ್ದು, ನಾಳೆ ಬೆಳಗಾವಿ ಮತ್ತು ವಿಜಾಪುರ, ನಾಡಿದ್ದು, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಬರ ಪರಿಶೀಲನೆ ನಡೆಸಲಿದೆ. 2ನೇ ತಂಡ ನಾಳೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ, ಹಾಗೂ ನಾಡಿದ್ದು, ವಿಜಯನಗರ, ಬಳ್ಳಾರಿ ಜಿಲ್ಲೆಗಳ ಬರ ಅಧ್ಯಯನ ನಡೆಸಲಿದೆ. ಮೂರನೇ ತಂಡ ನಾಳೆ ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಗಳ ಪ್ರವಾಸ ನಡೆಸಿ ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡಲಿದ್ದು, ನಾಡಿದ್ದು ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆ ಪ್ರವಾಸ ನಡೆಸಿ ಬೆಂಗಳೂರಿಗೆ ಆಗಮಿಸಲಿದೆ. ಅಕ್ಟೋಬರ್ 8 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಬರ ಪರಿಸ್ಥಿತಿ ಅಧ್ಯಯನ ನಡೆಸಲಿದೆ. ಮೂರು ತಂಡಗಳು ಅಕ್ಟೋಬರ್ 9 ರಂದು ಬೆಂಗಳೂರಿನಲ್ಲಿ ಮತ್ತೊಮ್ಮೆ ಸ್ಥಳೀಯ ಅಧಿಕಾರಿಗಳಿಂದ ಸಂಕ್ಷಿಪ್ತ ವಿವರಣೆ ಪಡೆದು ದೆಹಲಿಗೆ ತೆರಳಲಿವೆ. ಕೇಂದ್ರ ತಂಡ ಜಿಲ್ಲೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಈ ಸಾಲಿನ ಮಳೆಯ ವಾಸ್ತವ ಪರಿಸ್ಥಿತಿ ಮನವರಿಕೆ ಮಾಡಿಕೊಡಬೇಕು. ಹಲವು ಕಡೆ ಸಂಪೂರ್ಣ ಬೆಳೆ ಹಾನಿಯಾಗಿದ್ದು, ಕೆಲವೆಡೆ ಬೆಳೆ ಇದ್ದರೂ ಉಂಟಾಗಲಿರುವ ತೀವ್ರ ಇಳುವರಿ ಕುಸಿತದ ಬಗ್ಗೆ ಪರಿಣಾಮಕಾರಿಯಾಗಿ ವಿವರಿಸಬೇಕು ಎಂದು ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******

**"ಪ್ರಧಾನಮಂತ್ರಿ ಉಜ್ವಲಾ ಯೋಜನೆಯಡಿ" ಪ್ರತಿ ಫಲಾನುಭವಿಗಳಿಗೆ ನೀಡುವ** ಸಹಾಯ ಧನವನ್ನು ಪ್ರಸಕ್ತ 200 ರೂಪಾಯಿಯಿಂದ 300 ರೂಪಾಯಿಗೆ ಏರಿಸಲು ಕೇಂದ್ರ ಸಚಿವ ಸಂಪುಟ ನಿರ್ಧರಿಸಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅನುರಾಗ್ ಸಿಂಗ್ ಠಾಕೂರ್ ಹೇಳಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಿನ್ನೆ ನಡೆದ ಸಚಿವ ಸಂಪುಟದ ನಂತರ ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಅಡುಗೆ ಅರಿಶಿಣದ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ರಾಷ್ಟ್ರೀಯ ಅರಿಶಿಣ ಮಂಡಳಿ ರಚಿಸಲು ಸಚಿವ ಸಂಪುಟ ನಿರ್ಧರಿಸಿದೆ. ಪ್ರಸ್ತುತ ಭಾರತ ಅರಿಶಿಣ ಉತ್ಪಾದನೆ, ಬಳಕೆ ಮತ್ತು ರಫ್ತು ಮಾಡುವ

ಅತಿದೊಡ್ಡ ರಾಷ್ಟ್ರವಾಗಿದ್ದು, ಸುಮಾರು 1 ಸಾವಿರದ 600 ಕೋಟಿ ರೂಪಾಯಿ ಮೌಲ್ಯದ ಅರಿಶಿಣವನ್ನು ರಫ್ತು ಮಾಡಲಾಗುತ್ತಿದೆ; ಈ ಮೌಲ್ಯವನ್ನು ಇನ್ನು ಕೆಲ ವ ರ್ಗಗಳಲ್ಲಿ 8 ಸಾವಿರದ 400 ಕೋಟಿ ರೂಪಾಯಿಗಳಿಗೆ ಏರಿಕೆ ಮಾಡುವ ಗುರಿ ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು.

*******

**ಪ್ರವಾಸೋದ್ಯಮ ಕ್ಷೇತ್ರದ ಸರ್ವಾಂಗೀಣ** ಅಭಿವೃದ್ಧಿಗೆ ಕೇಂದ್ರ ಸರ್ಕಾರ ಒದಗಿಸಿರುವ ಸೌಲಭ್ಯ ಮತ್ತು ಯೋಜನೆಗಳನ್ನು ದೇಶದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಬಳಸಿಕೊಳ್ಳಬೇಕು ಎಂದು ಕೇಂದ್ರ ಪ್ರವಾಸೋದ್ಯಮ ಮತ್ತು ರಕ್ಷಣಾ ಖಾತೆ ರಾಜ್ಯ ಸಚಿವ ಅಜಯ್ ಭಟ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಕಡಿಮೆ ಪರಿಚಿತ ಐತಿಹಾಸಿಕ ಸ್ಥಳಗಳನ್ನು ಗುರುತಿಸಿ ಜನಪ್ರಿಯಗೊಳಿಸುವಂತೆ ಮತ್ತು ಪ್ರವಾಸಿಗರಿಗೆ ಈ ಸ್ಥಳಗಳ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

*******

**ರಾಜ್ಯದಲ್ಲಿ ಅಸಂಘಟಿತ ವಲಯಕ್ಕೆ ಸೇರದ ಸುಮಾರು ಶೇಕಡಾ 85 ರಷ್ಟು ಜನ** ಕಾರ್ಮಿಕರಿದ್ದು, ಇವರೆಲ್ಲರಿಗೂ ಸಾಮಾಜಿಕ ಭದ್ರತೆ ಒದಗಿಸುವ ನೂತನ ಯೋಜನೆ ಜಾರಿಗೊಳಿಸುವ ಚಿಂತನೆ ನಡೆದಿದೆ. ಈ ಬಗ್ಗೆ ಈಗಾಗಲೇ ಮುಖ್ಯಮಂತ್ರಿಯವರೊಂದಿಗೆ ಸಮಾಲೋಚನೆ ನಡೆಸಲಾಗಿದೆ ಎಂದು ಕಾರ್ಮಿಕ ಖಾತೆ ಸಚಿವ ಸಂತೋಷ ಲಾಡ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ಯೋಜನೆ ಮುಂಬರುವ ಆರು ತಿಂಗಳೊಳಗಾಗಿ ಜಾರಿಗೊಳಿಸಲಾಗುವುದು. ರಾಜ್ಯದಲ್ಲಿ ಎರಡು ಕೋಟಿ ಕಾರ್ಮಿಕರಿಗೆ ವಿವಿಧ ಲಾಖೆಗಳ ಮೂಲಕ ಸರ್ಕಾರದ ಸೌಕರ್ಯಗಳು ದೊರೆಯುತ್ತಿವೆ. ಬಹುಸಂಖ್ಯಾತ ಅಸಂಘಟಿತ ವಲಯಕ್ಕೆ ಇನ್ನೂ ಹೆಚ್ಚಿನ ಸೌಕರ್ಯ ಲಭಿಸುವ ಹಿನ್ನಲೆಯಲ್ಲಿ ವಿವಿಧ ಇಲಾಖೆಗಳ ಸಹಯೋಗದ ಮೂಲಕ ಏಕಗವಾಕ್ಷಿ ಯೋಜನೆ ಜಾರಿಗೊಳಿಸಲಾಗುವುದು. ಖಾಸಗಿ ವಲಯದಲ್ಲಿ ಸುಮಾರು 40 ಲಕ್ಷ ಜನ ಕಾರ್ಮಿಕರ ಒಂದು ಕೋಟಿ ಕುಟುಂಬಗಳಿಗೆ ಸಾಮಾಜಿಕ ಭದ್ರತೆ ಒದಗಿಸುವ ಯೋಜನೆ ಸರ್ಕಾರದ ಮುಂದಿದೆ ಎಂದರು.

*******

**'ಕಿತ್ತೂರು ಉತ್ಸವವನ್ನು ಈ ಬಾರಿ ಕೂಡ ಅಕ್ಟೋಬರ್ 23 ರಿಂದ ಮೂರು ದಿನಗಳ** ಕಾಲ ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುವುದು. ಈ ನಿಟ್ಟಿನಲ್ಲಿ ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಈಗಾಗಲೇ ಐದು ಕೋಟಿ ರೂಪಾಯಿ ಅನುದಾನ ನೀಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಕಿತ್ತೂರು ಉತ್ಸವ ಹಿನ್ನೆಲೆಯಲ್ಲಿ ಚನ್ನಮ್ಮನ ಕಿತ್ತೂರಿನಲ್ಲಿ ನಿನ್ನೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರವಾಸಿ ತಾಣವಾಗಿರುವ ಕಿತ್ತೂರಿನಲ್ಲಿ, ಲೋಕೋಪಯೋಗಿ ಇಲಾಖೆಯ ವತಿಯಿಂದ 50 ಶೌಚಾಲಯಗಳನ್ನು ನಿರ್ಮಿಸಲಾಗುವುದು. ಇದಕ್ಕಾಗಿ ಪಟ್ಟಣ ಪಂಚಾಯತಿ ಮತ್ತು ಸ್ಥಳೀಯರು ಸೂಕ್ತ ಜಾಗೆಯನ್ನು ಒದಗಿಸಬೇಕು. ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಐತಿಹಾಸಿಕ ಪ್ರಾಮುಖ್ಯತೆ ಇರುವ ರಣಗಟ್ಟಿ ಕೆರೆ ಅಭಿವೃದ್ಧಿಪಡಿಸಲಾಗುವುದು ಎಂದರು.

*******

**ರಾಜ್ಯದ 400 ಉಪ ವಿತರಣಾ** ಕೇಂದ್ರದ ವ್ಯಾಪ್ತಿಯಲ್ಲಿ 3 ಸಾವಿರ ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದನೆಗೆ ತೀರ್ಮಾನಿಸಲಾಗಿದೆ ಎಂದು ಇಂಧನ ಖಾತೆ ಸಚಿವ ಕೆ. ಜೆ. ಜಾರ್ಜ್ ತಿಳಿಸಿದ್ದಾರೆ. ಅರಸೀಕೆರೆ ತಾಲ್ಲೂಕಿನ ದಾಸೇನಹಳ್ಳಿಯಲ್ಲಿ ಸೌರ ಸ್ಥಾವರಕ್ಕಾಗಿ ಸ್ಥಳ ವೀಕ್ಷಿಸಿ ನಂತರ ಮಾತನಾಡಿದ ಅವರು, ಅರಸೀಕೆರೆ ತಾಲ್ಲೂಕಿನಲ್ಲಿ 24 ಸಾವಿರದ 926 ಪಂಪ್ ಸೆಟಗಳಿವೆ. ಇದರಲ್ಲಿ 3 ಸಾವಿರದ 932 ರೈತರು ಅಕ್ರಮ ಸಕ್ರಮಕ್ಕಾಗಿ ಅರ್ಜಿ ಸಲ್ಲಿಸಿದ್ದು, 2 ಸಾವಿರದ 180 ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ. 1 ಸಾವಿರದ 750 ಅರ್ಜಿಗಳು ಬಾಕಿ ಇವೆ ಎಂದರು.

*******

**ಈಗ ಸಂಕ್ಷಿಪ್ತ ಸುದ್ದಿಗಳು**

**ಎಲ್ಲ ಸಮುದಾಯದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ** ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಜಾತಿ ಗಣತಿ ವರದಿ ಬಳಿಕ ಸಾಧಕ ಬಾಧಕಗಳ ಕುರಿತು ಚರ್ಚಿಸಿ ವರದಿ ಬಿಡುಗಡೆ ಮಾಡಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ.

*******

**ಉತ್ತರಕನ್ನಡ ಜಿಲ್ಲೆಯ ಕಾರವಾರದ ಬಾಲಕಿಯರ ಬಾಲ ಮಂದಿರ** ಮತ್ತು ಸ್ವೀಕಾರ ಕೇಂದ್ರಕ್ಕೆ ಹೈಕೋರ್ಟ ನ್ಯಾಯಾಧೀಶ, ಜಿಲ್ಲೆಯ ಆಡಳಿತಾತ್ಮಕ ನ್ಯಾಯಮೂರ್ತಿ ಕೆ.ನಟರಾಜನ್ ಭೇಟಿ ನೀಡಿ, ಮಕ್ಕಳು ಮತ್ತು ಸ್ವೀಕಾರ ಕೇಂದ್ರದಲ್ಲಿನ ಮಹಿಳೆಯರ ಯೋಗಕ್ಷೇಮ ವಿಚಾರಿಸಿದರು.

*******

**ಚಿತ್ರದುರ್ಗ ತಾಲ್ಲೂಕಿನ 158 ಗ್ರಾಮಗಳಿಗೆ ವಾಣಿವಿಲಾಸ ಸಾಗರ ಜಲಾಶಯದಿಂದ** ಶುದ್ಧ ಕುಡಿಯುವ ನೀರು ಪೂರೈಸುವ ಕಾಮಗಾರಿಗೆ ಶೀಘ್ರದಲ್ಲೇ ಚಾಲನೆ ನೀಡಲಾಗುವುದು ಎಂದು ಶಾಸಕ ಕೆ.ಸಿ.ವೀರೇಂದ್ರ ಹೇಳಿದ್ದಾರೆ. ಚಿತ್ರದುರ್ಗದಲ್ಲಿ ಆಯೋಜಿಸಲಾದ ತಾಲ್ಲೂಕು ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

*******

**ಚಿಕ್ಕಮಗಳೂರು ಜಿಲ್ಲೆಯಲ್ಲಿ ದತ್ತ ಮಾಲೆ ಹಾಗೂ ದತ್ತ ಜಯಂತಿ** ಕಾರ್ಯಕ್ರಮಗಳನ್ನು ಸುವ್ಯವಸ್ಥಿತವಾಗಿ ನಡೆಸಲು ಸಂಘಟನೆಗಳು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸೂಚಿಸಿದ್ದಾರೆ.

*******

**ಹಾವೇರಿ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ** ಯೋಜನೆ 2024–25ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸುವ ಉದ್ದೇಶದಿಂದ 'ಉದ್ಯೋಗ ಖಾತ್ರಿ ನಡಿಗೆ ಸುಸ್ಥಿರತೆಯೆಡೆಗೆ' ಅಂಗವಾಗಿ ಅಕ್ಟೋಬರ್ ತಿಂಗಳ ಅವಧಿಯಲ್ಲಿ 'ಮನೆ– ಮನೆ ಜಾಥಾ' ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಕ್ಷಯ ಶ್ರೀಧರ ತಿಳಿಸಿದ್ದಾರೆ.

*******

**ವನ್ಯಜೀವಿಗಳು ಪರಿಸರದ ಸಂಪತ್ತಾಗಿದ್ದು,** ಪ್ರತಿಯೊಬ್ಬರೂ ವನ್ಯಜೀವಿಗಳ ಸಂರಕ್ಷಣೆಗಾಗಿ ಶ್ರಮಿಸಬೇಕು. ಕಾಡು, ವನ್ಯಜೀವಿಗಳು ಮತ್ತು ಮನು ್ಯರ ನಡುವೆ ಪರಿಸರ ಸಮತೋಲನ ಕಾಯ್ದುಕೊಂಡು ಮುಂದಿನ ಪೀಳಿಗೆಗೆ ಬಳುವಳಿ ರೂಪದಲ್ಲಿ ಉಳಿಸಲು ಮುಂದಾಗಬೇಕು ಎಂದು ಚಾಮರಾಜನಗರ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಹೇಳಿದ್ದಾರೆ. 69ನೇ ವನ್ಯಜೀವಿ ಸಪ್ತಾಹದ ಅಂಗವಾಗಿ ಚಾಮರಾಜನಗರ ಪಟ್ಟಣದ ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶ ವಲಯದ ಕಚೇರಿ ಬಳಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

*******

**ಧಾರವಾಡ ಕೃಷಿ ಇಲಾಖೆ ರೈತ ಸಂಪರ್ಕ** ಕೇಂದ್ರದಲ್ಲಿ 2023–24ನೇ ಸಾಲಿನ ಹಿಂಗಾರು ಬಿತ್ತನೆ ಬೀಜವನ್ನು ರಿಯಾಯತಿ ದರದಲ್ಲಿ ವಿತರಿಸುವ ಕಾರ್ಯಕ್ರಮಕ್ಕೆ ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕ ಸಿದ್ದಪ್ಪ.ಬ.ಸಪೂರಿ ಚಾಲನೆ ನೀಡಿದರು.

*******